ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301
email : registrar@uni-mysore.ac.
www.uni-mysore.ac.in

ಮೈಸೂರು ವಿಶ್ವವಿದ್ಯಾನಿಲಯ
ಸ್ಥಾಪನೆ : 1916

ವಿಶ್ವವಿದ್ಯಾನಿಲಯಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570005

ಸಂಖ್ಯೆ: ಎಸಿ3/441/2016-17 ದಿನಾಂಕ: 17.12.2018.

ಸುತ್ತೋಲೆ

ವಿಷಯ:- 2018-19ನೇ ಶೈಕ್ಷಣಿಕ ಸಾಲಿಗೆ ಪರಿಶಿಷ್ಟ ಜಾತಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮತ್ತು ಪ್ರೋತ್ಸಹಧನ ಪಡೆಯಲು ವಿದ್ಯಾರ್ಥಿಗಳು ಆಧಾರ್‌ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ (SEED) ಮಾಡುವ ಬಗ್ಗೆ.

ಉಲ್ಲೇಖ:. ಸಹಾಯಕ ನಿರ್ದೇಶಕರು ಗ್ರೇಡ್-1 ಸಮಾಜ ಕಲ್ಯಾಣ ಇಲಾಖೆ ಮೈಸೂರು ತಾಲ್ಲೂಕು, ಮೈಸೂರು ಅವರ ಪತ್ರಸಂ:ಸನಿಸಕಇ/ಮೈ/ಮೆ.ನಂ.ವಿ.ವೇ/ಸಿಆರ್/ 2018-19 ದಿನಾಂಕ.11/12/2018.

*****

ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಅಧ್ಯಯನ ವಿಭಾಗಗಳು/ ಕೇಂದ್ರಗಳು/ ಘಟಕ ಕಾಲೇಜುಗಳು/ಸಮಯೋಜಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಅರ್ಹ ಪರಿಶಿಷ್ಟಜಾತಿ ಫಲಾನುಭವಿ ವಿದ್ಯಾರ್ಥಿಗಳು ಅವರ ಆಧಾರ್ ಸಂಖ್ಯೆಗಳನ್ನು ತಮ್ಮ ಬ್ಯಾಂಕ್ ಖಾತೆಗೆ ಲಿಂಕ್ ಮಾಡುವಂತೆ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಮೈಸೂರು ತಾಲ್ಲೂಕು, ಮೈಸೂರು ಇವರು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ.

ಆದರಂತೆ 2018-19ನೇ ಸಾಲಿಗೆ ವಿದ್ಯಾರ್ಥಿವೇತನ ಪಡೆಯುವ ಎಲ್ಲಾ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಬ್ರಾಂಚ್‌ಗಳಿಗೆ ತೆರಳಿ ತಮ್ಮ ಆಧಾರ್ ಸಂಖ್ಯೆಯನ್ನು ವಿದ್ಯಾರ್ಥಿವೇತನ ಪಡೆಯಲು ಸಮಾಜ ಕಲ್ಯಾಣ ಇಲಾಖೆಗೆ ನೀಡಿರುವ ಬ್ಯಾಂಕ್ ಖಾತೆಗೆ ಲಿಂಕ್ **(SEED)** ಮಾಡಲು ಕ್ರಮವಹಿಸಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ಸಂಬಂಧಪಟ್ಟ ಅಧ್ಯಯನ ವಿಭಾಗಗಳು/ ಕೇಂದ್ರಗಳು/ ಘಟಕ ಕಾಲೇಜುಗಳು/ಸಂಯೋಜಿತ ಕಾಲೇಜುಗಳ ನಿರ್ದೇಶಕರು/ಅಧ್ಯಕ್ಷರು ಪ್ರಾಂಶುಪಾಲರುಗಳು ಕಡ್ಡಾಯವಾಗಿ ಸೂಚನಾ ಫಲಕದಲ್ಲಿ ಅಳವಡಿಸಿ ವಿದ್ಯಾರ್ಥಿಗಳಿಗೆ ಸೂಕ್ತ ನಿರ್ದೇಶನ ನೀಡಲು ಕ್ರಮವಹಿಸಬೇಕಾಗಿ ಸೂಚಿಸಿದೆ.

ಕುಲಸಚಿವರಿಂದ ಕರಡು ಅನುಮೋದಿಸಿದೆ.

17/12

ಉಪ ಕುಲಸಚಿವ (ಶೈಕ್ಷಣಿಕ)

ಗೆ:

1. ಅಧ್ಯಕ್ಷರು/ನಿರ್ದೇಶಕರು ಎಲ್ಲಾ ಅಧ್ಯಯನ ವಿಭಾಗಗಳು, ಮಾಗಂ/ಹಾಸನ/ಮಂಡ್ಯ/ಚಾಮರಾಜನಗರ
2. ಎಲ್ಲಾ ಪ್ರಾಂಶುಪಾಲರು, ಘಟಕ ಕಾಲೇಜುಗಳು/ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಎಲ್ಲಾ ಸ್ನಾತಕ/ಸ್ನಾತಕೋತ್ತರ ಸಂಯೋಜಿತ ಕಾಲೇಜುಗಳಿಗೆ-ಕಡ್ಡಾಯವಾಗಿ ಸೂಚನಾ ಫಲಕದಲ್ಲಿ ಅಳವಡಿಸಿ ವಿದ್ಯಾರ್ಥಿಗಳಿಗೆ ಸೂಕ್ತ ನಿರ್ದೇಶನ ನೀಡಲು ಕ್ರಮವಹಿಸಬೇಕಾಗಿ ಸೂಚಿಸಿದೆ.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಆಡಳಿತಾಧಿಕಾರಿಗಳು,ಆಡಳಿತಾಧಿಕಾರಿಗಳ ಕಛೇರಿ ಮಾಗಂ, ಮೈಸೂರು.
5. ಉಪಕುಲಸಚಿವರು-ಪ.ಜಾತಿ/ಪವರ್ಗ ಘಟಕ, ಮೈಸೂರು ವಿಶ್ವವಿದ್ಯಾನಿಲಯ ಮೈಶರು
6. ಕಛೇರಿ ಪ್ರತಿ.